# ಕರ್ನಾಟಕ ವಿಧಾನ ಪರಿಷತ್ತು

ಲಘು ಪ್ರಕಟಣೆ ಭಾಗ –2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

**ಶನಿವಾರ, ದಿನಾಂಕ: 20ನೇ ಜೂನ್, 2020**

**ಸಂಖ್ಯೆ: 63**

ವಿಧಾನ ಪರಿಷತ್ತಿನ 140ನೆಯ ಅಧಿವೇಶನದಲ್ಲಿ ದಿನಾಂಕ:13.03.2020ರಂದು ಮಾನ್ಯ ಶಾಸಕರಾದ ಶ್ರೀ ರಘುನಾಥ್ ರಾವ್ ಮಲ್ಕಾಪುರೆ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:133(959)ರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ವಿಭಾಗಗಳಲ್ಲಿ ಬಿಡುಗಡೆಯಾಗಿದ್ದ ಅನುದಾನವನ್ನು ಬಳಕೆ ಮಾಡಿಕೊಳ್ಳದೆ ವಿವಿಧ ಬ್ಯಾಂಕ್‌ಗಳಲ್ಲಿ ಠೇವಣಿ ಇಟ್ಟಿರುವ ಬಗ್ಗೆ ಸದನದಲ್ಲಿ ಪ್ರಸ್ತಾಪಿಸಿದ ಹಿನ್ನಲೆಯಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 242(ಎ)ರ ರೀತ್ಯಾ ಈ ಬಗ್ಗೆ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ವಿಶೇಷ ಸದನ ಸಮಿತಿಯನ್ನು ಶ್ರೀ **ರಘುನಾಥ್ ರಾವ್ ಮಲ್ಕಾಪೂರೆ** ಅವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ **08** ಸದಸ್ಯರನ್ನೊಳಗೊಂಡಂತೆ ರಚಿಸಲಾಗಿರುತ್ತದೆ. ಸಮಿತಿಯು ಮೂರು ತಿಂಗಳ ಅವಧಿಯೊಳಗೆ ವರದಿಯನ್ನು ಸಲ್ಲಿಸುವುದು.

**ಶ್ರೀಯುತರುಗಳಾದ:**

| | | |
|---|---|---|
| **01.** | **ರಘುನಾಥ್ ರಾವ್ ಮಲ್ಕಾಪೂರೆ** | **ಅಧ್ಯಕ್ಷರು** |
| **02.** | **ಆಯನೂರು ಮಂಜುನಾಥ್** | **ಸದಸ್ಯರು** |
| **03.** | **ಕೆ.ಟಿ ಶ್ರೀಕಂಠೇಗೌಡ** | **ಸದಸ್ಯರು** |
| **04.** | **ಆರ್. ಧರ್ಮಸೇನ** | **ಸದಸ್ಯರು** |
| **05.** | **ಎಂ.ಕೆ.ಪ್ರಾಣೇಶ್** | **ಸದಸ್ಯರು** |
| **06.** | **ಆರ್.ಪ್ರಸನ್ನ ಕುಮಾರ್** | **ಸದಸ್ಯರು** |
| **07.** | **ಎಂ.ಎ.ಗೋಪಾಲಸ್ವಾಮಿ** | **ಸದಸ್ಯರು** |
| **08.** | **ಎನ್.ಅಪ್ಪಾಜಿಗೌಡ** | **ಸದಸ್ಯರು** |
| **09.** | **ಪಿ.ಆರ್.ರಮೇಶ್** | **ಸದಸ್ಯರು** |

# ಪರಿಶೀಲನಾ ಅಂಶಗಳು

01. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಜ್ಯದಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮದಡಿಯಲ್ಲಿ ರಾಜ್ಯದ ವಿವಿಧ ವಿಭಾಗಗಳಿಗೆ ಮಂಜೂರು ಮಾಡಿರುವ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಲಾಗಿದೆಯೇ ಎಂಬುದರ ಕುರಿತು ಪರಿಶೀಲಿಸುವುದು.

02. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಜ್ಯದಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮದಡಿಯಲ್ಲಿ ರಾಜ್ಯದ ವಿವಿಧ ವಿಭಾಗಗಳಿಗೆ ಮಂಜೂರು ಮಾಡಿರುವ ಅನುದಾನವನ್ನು ಉಪಯೋಗಿಸಲು ರೂಪಿಸಿಕೊಂಡಿರುವ ಮಾನದಂಡಗಳನ್ನು ಪರಿಶೀಲಿಸುವುದು.

03. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಜ್ಯದಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮದಡಿಯಲ್ಲಿ ರಾಜ್ಯದ ವಿವಿಧ ವಿಭಾಗಗಳಿಗೆ ಮಂಜೂರು ಮಾಡಿರುವ ಅನುದಾನದ ಮೊತ್ತವನ್ನು ಮುಖ್ಯವಾಹಿನಿ ಖಾತೆಗೆ ಜಮೆ ಮಾಡದೆ ಇತರೆ ಬ್ಯಾಂಕ್ ಖಾತೆಗಳಲ್ಲಿ/ ವೈಯಕ್ತಿಕ ಖಾತೆಗಳಲ್ಲಿ ಜಮೆ ಮಾಡಿರುವ ಕುರಿತು ಪರಿಶೀಲಿಸುವುದು.

04. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಜ್ಯದಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮದಡಿಯಲ್ಲಿ ರಾಜ್ಯದ ವಿವಿಧ ವಿಭಾಗಗಳಿಗೆ ಮಂಜೂರು ಮಾಡಿರುವ ಅನುದಾನವನ್ನು ಬಳಸದೆ ಇಚ್ಛಾನುಸಾರ ಉಳಿತಾಯ ಖಾತೆಯಲ್ಲಿ ಜಮೆ ಮಾಡಿ, ಅದರಿಂದ ಬಂದಂತಹ ಕೋಟ್ಯಾಂತರ ರೂಪಾಯಿಗಳ ಬಡ್ಡಿ ಹಣವನ್ನು ಬಳಸಿಕೊಂಡಿರುವ ಕುರಿತು ಪರಿಶೀಲಿಸುವುದು.

05. ಶ್ರೀಯುತ ಪುನ್ನಟಿ ಶ್ರೀಧರ ರವರ ಅಧ್ಯಕ್ಷತೆಯ ಸಮಿತಿಯ ಶಿಫಾರಸ್ಸುಗಳ ಪ್ರಮುಖ ಅಂಶಗಳೇನು ಮತ್ತು ಅವುಗಳನ್ನು ಕಾರ್ಯರೂಪಕ್ಕೆ ತರದಿರಲು ಕಾರಣಗಳೇನು ಎಂಬುದರ ಬಗ್ಗೆ ಪರಿಶೀಲಿಸುವುದು.

06. ಶ್ರೀಯುತ ಎನ್.ಬಿ. ಶಿವರುದ್ರಪ್ಪ, ಅಪರ ನಿರ್ದೇಶಕರು, ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇವರ ನೇತೃತ್ವದಲ್ಲಿ ರಚಿಸಲಾಗಿದ್ದ ತಂಡದ ವರದಿಯಲ್ಲಿ ಈ ಕುರಿತು ಅವ್ಯವಹಾರ ನಡೆದಿರುವ ಬಗ್ಗೆ ವರದಿ ನೀಡಿದ್ದರು ಕ್ರಮ ಕೈಗೊಳ್ಳದಿರುವ ಬಗ್ಗೆ ಪರಿಶೀಲಿಸುವುದು.

07. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಜ್ಯದಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮದಡಿಯಲ್ಲಿ ರಾಜ್ಯದ ವಿವಿಧ ವಿಭಾಗಗಳಿಗೆ ಮಂಜೂರು ಮಾಡಿರುವ ಅನುದಾನದ ಮೊತ್ತವನ್ನು ಮುಖ್ಯವಾಹಿನಿ ಖಾತೆಗೆ ಜಮೆ ಮಾಡದೆ ಇತರೆ ಬ್ಯಾಂಕ್ ಖಾತೆಗಳಲ್ಲಿ/ ವೈಯುಕ್ತಿಕ ಖಾತೆಗಳಲ್ಲಿ ಜಮೆ ಮಾಡಿ ಅವ್ಯವಹಾರ ನಡೆಸಿರುವ ಅಧಿಕಾರಿ/ನೌಕರರುಗಳ ಮೇಲೆ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಪರಿಶೀಲಿಸುವುದು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಶಾಸಕರುಗಳಿಗೆ**

**www.kla.kar.nic.in/council/ council.htm**